ಪ್ರಸ್ತಾವ ಹೀಗಿದೆ :

"ದಿನಾಂಕ 31-3-1997ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 01, 05, 09, 12, 13, 19, 21, 24, 25, 28, 30, 33, 34, 37, 38, 40, 41, 43, 44, 45, 47, 48, 49, 51, 52, 55, 57, 58, ಹಾಗೂ 59 ಇವುಗಳಿಗೆ ಸಂಬಂಧಪಟ್ಟಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗೂ ಸೇರಿ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತವನ್ನು ಈ ಸಭೆಯು ಮಂಜೂರು ಮಾಡುವುದು."

ಪ್ರಸ್ತಾವವನ್ನು ಅಂಗೀಕರಿಸಲಾಯಿತು ಮತ್ತು ಬೇಡಿಕೆಗಳನ್ನು ಮಂಜೂರು ಮಾಡಲಾಯಿತು.

8) ಶಾಸನ ರಚನೆ ವಿಧೇಯಕಗಳನ್ನು ಮಂಡಿಸುವುದು ಕರ್ನಾಟಕ ಧನವಿನಿಯೋಗ (ನಂ. 2) ವಿಧೇಯಕ, 1997 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಸಿದ್ಧರಾಮಯ್ಯ : (ಉಪಮುಖ್ಯಮಂತ್ರಿಗಳು)

ಮಾನ್ಯ ಅಧ್ಯಕ್ಷರೆ, 1997ನೇ ಸಾಲಿನ ಕರ್ನಾಟಕ ಧನವಿನಿಯೋಗ (ನಂ. 2) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"1997ರ ಕರ್ನಾಟಕ ಧನವಿನೋಯಗ (ನಂ. 2) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಸಿದ್ಧರಾಮಯ್ಯ : ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಧನವಿನಿಯೋಗ (ನಂ. 2) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.